ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ", ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು - 560 099.
URL : www.anekal-pa.in

## ಪ್ರಾರಂಭಿಕ ಪ್ರಮಾಣ ಪತ್ರ

ಸಂಖ್ಯೆ:ಆಯೋಪ್ರಾ/ಸಿಸಿ/723/2013-14

ದಿನಾಂಕ:೨೦.೦೧.೨೦೧೪

ಶ್ರೀ ಜಗನ್ನಾಥ್ ವೆಂಕಟಾದ್ರಿ ಹಾಗೂ ಇತರರ ಪರವಾಗಿ ಜಿಪಿಎ ದಾರರಾದ **ಮೆ: ಅಶ್ವಿನಿ ಪ್ರಾಪರ್ಟೀಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್,** ಇವರುಗಳು ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಕೋಟಿಗಾನಹಳ್ಳಿ ಗ್ರಾಮದ ಸ.ನಂ.16/3ರಲ್ಲಿ 01ಎಕರೆ 08.08ಗುಂಟೆ ಜಮೀನಿನಲ್ಲಿ ಅನುಮೋದನೆಯಾಗಿರುವ ಒಂಟಿ ನಿವೇಶನ ನಕ್ಷೆಯಲ್ಲಿ ನಕ್ಷೆಯಲ್ಲಿನ **ಖಾತೆ ಸಂಖ್ಯೆ:502/73**ರಲ್ಲಿ ಸ್ಟಿಲ್ಟ್+ನೆಲ+ಮೂರು ಮಹಡಿಗಳ ಒಟ್ಟು **12898.24ಚ.ಮೀ.** ವಿಸ್ತೀರ್ಣದಲ್ಲಿ ಒಟ್ಟು **160ಘಟಕ**ಗಳ ವಸತಿ ಸಮುಚ್ಛಯ ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಅನುಮೋದನಾ ಶುಲ್ಕ **ರೂ.66,000/-ಡಿ.ಡಿ.ನಂ.026423** ಹಾಗೂ ಭದ್ರತಾ ಠೇವಣಿ ಶುಲ್ಕ **ರೂ.6,46,000/-ಡಿ.ಡಿ. ನಂ.026422 ದಿನಾಂಕ:06-01-2014**ರಂದು ಪಾವತಿಸಲಾಗಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 15(1)ರನ್ವಯ ಈ ಕೆಳಕಂಡ ಷರತ್ತುಗೊಳಪಡಿಸಿ ಪ್ರಾರಂಭಿಕ ಪ್ರಮಾಣ ಪತ್ರ ನೀಡಿದೆ,

### ಷರತ್ತುಗಳು

1) ಮೇಲ್ಕಂಡ ನಿವೇಶನದಲ್ಲಿ ಕಟ್ಟುವ ಕಟ್ಟಡವನ್ನು ಈ ಕಛೇರಿಯಿಂದ ಅನುಮತಿ ನೀಡಿರುವಂತೆ ವಸತಿ ಉಪಯೋಗಕ್ಕೆ ಮಾತ್ರ ಉಪಯೋಗಿಸತಕ್ಕದ್ದು. ಮತ್ತು ಕಟ್ಟಡವನ್ನು ಅನುಮೋದಿತ ನಕ್ಷೆಯಂತೆ ಕಟ್ಟಡ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮ ಯೋಜನಾ ಕಾಯ್ದೆ 1961ರ ಸೆಕ್ಷನ್ 15(1)ರಡಿ ನೀಡಲಾಗಿರುವ ಪ್ರಾರಂಭಿಕ ಪ್ರಮಾಣ ಪತ್ರವಾಗಿಯತ್ತದೆ.
3) ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ನಿಯೋಜಿಸಿಕೊಳ್ಳತಕ್ಕದಲ್ಲ.
4) ಕಟ್ಟಡ ನಿರ್ಮಾಣಕ್ಕೆ ಜಾರಿಯಲ್ಲಿರುವ ವಲಯ ನಿಯಮಾವಳಿಗಳು ಮತ್ತು ಕಟ್ಟಡದ, ವಿಧಿಗಳ ನಿಬಂಧನೆ -ಗಳಿಗೆ ಅನುಗುಣವಾಗಿರತಕ್ಕದ್ದು.
5) ಈ ಪ್ರಾರಂಭಿಕ ಪ್ರಮಾಣ ಪತ್ರವು **ಮಂಜೂರಾದ ದಿನಾಂಕದಿಂದ ಎರಡು ವರ್ಷದವರೆಗೆ ಮಾತ್ರ ಮಾನ್ಯತೆ ಹೊಂದಿರುತ್ತದೆ.** ಈ ಅವಧಿ ಮುಗಿದ ನಂತರ ಹೊಸದಾಗಿ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯದೆ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಹಾಗೂ ಮುಂದುವರೆಸಬಾರದು.
6) ಅನುಮೋದಿತ ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಮತ್ತು ಏನಾದರೂ ಬದಲಾವಣೆಗಳು ಅವಶ್ಯವಿದ್ದಲ್ಲಿ ಮಾರ್ಪಾಡಿತ ನಕ್ಷೆಗೆ ಮಂಜೂರಾತಿ ಪಡೆದು ಮುಂದುವರೆಸತಕ್ಕದ್ದು.
7) ಒಂದು ಅನುಮೋದಿತ ಕಟ್ಟಡ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.
8) ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ರಸ್ತೆಯಲ್ಲಿ ಶೇಖರಣೆ ಮಾಡಬಾರದು, ಈ ಬಗ್ಗೆ ಕಂಡು ಬಂದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರವನ್ನು ರದ್ದುಪಡಿಸಲಾಗುವುದು.
9) ಕಟ್ಟಡ ಸಡುಜಾಗ ಪ್ರದೇಶದಲ್ಲಿ ಮರಗಳನ್ನು ಬೆಳೆಸತಕ್ಕದ್ದು.
10)ಪ್ರಸ್ತಾವಿತನಿವೇಶನವುಯಾವುದೇಭೂಸ್ವಾಧೀನಕ್ಕೆಒಳಪಟ್ಟಿದ್ದಲ್ಲಿಈಪ್ರಾಧಿಕಾರವುಜವಾಬ್ದಾರಿಯಾಗುವುದಿಲ್ಲ
11)ಸೋಲಾರ್ ವಾಟರ್ ಹೀಟರ್‌ನ್ನು ಕಟ್ಟಡದಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.
12) ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಈ ಕೆಳಗಿನ ಮತ್ತು ಇತರೆ ಯಾವುದೇ ಪ್ರಾಧಿಕಾರವು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಯಾವ ಪೂರ್ವ ಸೂಚನೆಯೂ ಇಲ್ಲದೇ ತಂತಾನೆ ರದ್ದಾಗುತ್ತದೆ.

ಮು.ಪಿ.ನೋ.

13)ನಿವೇಶನದ ಆವರಣದೊಳಗೆ ಮಳೆ ನೀರಿನ ಕೊಯ್ಲಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

14)ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ರವರ ಪತ್ರ ಸಂಖ್ಯೆ:PCB/187/CNP/13/3714, ದಿನಾಂಕ:25-09-2013ರಲ್ಲಿನ ನಿಬಂಧನೆಗಳನ್ನು ಚಾಚುತಪ್ಪದೇ ಪಾಲಿಸತಕ್ಕದ್ದು.

15)ಯಾವುದೇ ಸಿವಿಲ್ ವ್ಯಾಜ್ಯಗಳಿದ್ದಲ್ಲಿ, ನ್ಯಾಯಾಲಯದ ಆದೇಶಕ್ಕೆ ಬದ್ಧರಾಗಿರುವ, ಸುಳ್ಳು ಮಾಹಿತಿ ಅಥವಾ ಸಲ್ಲಿಸಿರುವ ಯಾವುದೇ ಮಾಹಿತಿ/ದಾಖಲೆಗಳು, ತಪ್ಪಾಗಿದ್ದಲ್ಲಿ/ಫೋರ್ಜರಿ ಆಗಿದ್ದಲ್ಲಿ/ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಕಟ್ಟಡ ನಕ್ಷೆ ಅನುಮೋದನೆಯು ಸ್ವಯಂಚಾಲಿತವಾಗಿ ರದ್ದಾಗುವ ನಿಬಂಧನೆಗೊಳ್ಳ -ಪಟ್ಟಿರುತ್ತದೆ.

16)ಕಟ್ಟಡ ನಿರ್ಮಾಣ ಕಾರ್ಯ ಪ್ರಾರಂಭಿಸುವ ಮುನ್ನ ಹಂದೇನಹಳ್ಳಿ ಗ್ರಾಮ ಪಂಚಾಯಿತಿಯಿಂದ ಪರವಾನಗೆ -ಯನ್ನು ಪಡೆಯತಕ್ಕದ್ದು.

17)ಅನುಮೋದಿತ ನಕ್ಷೆಯ ವಿವರಗಳು ಈ ಕೆಳಕಂಡಂತಿದೆ.

| ನಡುಜಾಗ | ವಲಯ ನಿಯಮಾವಳಿಯಂತೆ | ನಕ್ಷೆಯಂತೆ |
|---|---|---|
| ಮುಂಭಾಗ | 4.50 ಮೀ. | 6.36 ಮೀ. |
| ಹಿಂಭಾಗ | 4.50 ಮೀ. | 5.66 ಮೀ. |
| ಎಡಭಾಗ | 4.50 ಮೀ. | 5.00 ಮೀ. |
| ಬಲಭಾಗ | 4.50 ಮೀ. | 5.00 ಮೀ. |
| ನೆಲ ವಿಸ್ತೀರ್ಣ ಪ್ರಮಾಣ | 2.00 | 1.92 |
| ಕಟ್ಟಡದ ಅಂತಸ್ತುಗಳು | --- | ಸ್ಟಿಲ್ಟ್+ನೆಲ+ ಮೂರು ಮಹಡಿಗಳು |
| ವಾಹನ ನಿಲುಗಡೆ ಜಾಗ | 112 No's | 118 No's |

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 15(4)ರಂತೆ ಕ್ರಮ ಕೈಗೊಳ್ಳಲು ಪ್ರಾಧಿಕಾರಕ್ಕೆ ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.

20/01

(ಹೆಚ್.ಎಮ್.ಹನುಮಪ್ಪ)

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ
ನಿರ್ದೇಶಕರು ಹಾಗೂ ಸದಸ್ಯ- ಕಾರ್ಯದರ್ಶಿ,
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

ಇವರಿಗೆ,

ಶ್ರೀ ಜಗನ್ನಾಥ್ ವೆಂಕಟಾದ್ರಿ ಹಾಗೂ ಇತರರ ಪರವಾಗಿ ಜಿಪಿಎ ದಾರರಾದ
ಮೆ: ಅಶ್ವಿನಿ ಪ್ರಾಪರ್ಟೀಸ್ ಇಂಡಿಯಾ ಪ್ರೈ.ಲಿ.,
ನಂ.911, 39ನೇ ಕ್ರಾಸ್, 28ನೇ ಮೈನ್, 9ನೇ ಬ್ಲಾಕ್,
ಜಯನಗರ, ಬೆಂಗಳೂರು - 560 069.